# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1198 |
| ಸದಸ್ಯರ ಹೆಸರು | : | ಶ್ರೀ ಸೂರಜ್ ರೇವಣ್ಣ<br>(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 29-12-2022 |
| ಉತ್ತರಿಸುವವರು | : | ಸನ್ಮಾನ್ಯ ಮುಖ್ಯಮಂತ್ರಿಯವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಹಾಸನ ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಿಂದ ಸರ್ಕಾರ ಅರಣ್ಯ ಇಲಾಖೆ ವತಿಯಿಂದ ಮಾನವ ಆನೆದಾಳಿ ಸಂಘರ್ಷ ನಿಯಂತ್ರಣ ಕಾರ್ಯಕ್ರಮದ ಯೋಜನೆಯನ್ನು ಯಾವಾಗ ಜಾರಿಗೆ ತರಲಾಯಿತು; ಜಾರಿಗೆ ತಂದಿದ್ದಲ್ಲಿ, ಈ ಯೋಜನೆಯ ಉದ್ದೇಶಗಳೇನು. (ಸಂಪೂರ್ಣ ವಿವರ ನೀಡುವುದು) | 2019-20ನೇ ಸಾಲಿನ ಆಯವ್ಯಯ ಭಾಷಣದಲ್ಲಿ "ಉಪಯೋಗಿಸಿದ ರೈಲುಹಳಿ ತಡೆಗೋಡೆಯಿಂದ ಮಾನವ-ಆನೆ ಸಂಘರ್ಷ ನಿಯಂತ್ರಣ" ಎಂಬ ಹೊಸ ಕಾರ್ಯಕ್ರಮ / ಯೋಜನೆಯನ್ನು ಘೋಷಿಸಲಾಗಿರುತ್ತದೆ. ಅದರಂತೆ ಈ ಯೋಜನೆಯನ್ನು ಅನುಷ್ಠಾನಗೊಳಿಸಲಾಗಿದೆ.<br><br>ಉಪಯೋಗಿಸಿದ ರೈಲುಹಳಿಗಳನ್ನು ಉಪಯೋಗಿಸಿ ರೈಲ್ವೆ ಬ್ಯಾರಿಕೇಡ್ ನಿರ್ಮಿಸಿ ಅಳವಡಿಸುವುದರ ಮೂಲಕ ಕಾಡಾನೆ ಮತ್ತು ವನ್ಯಪ್ರಾಣಿಗಳ ಸಂಘರ್ಷ, ಬೆಳೆನಾಶ ಹಾಗೂ ವನ್ಯಪ್ರಾಣಿಗಳ ಪ್ರವೇಶ ತಡೆಗಟ್ಟುವ ಮತ್ತು ರೈತರಿಗೆ ದೀರ್ಘಕಾಲದವರೆಗೆ ಅನುಕೂಲ ಮಾಡಿಕೊಡುವ ಉದ್ದೇಶದಿಂದ ಜಾರಿಗೆ ತರಲಾಗಿರುತ್ತದೆ. |
| ಆ) | ಹಾಸನ ಜಿಲ್ಲೆಯಲ್ಲಿ ರೈಲು ಹಳಿಗಳನ್ನು ಬಳಸಿಕೊಂಡು ಎಷ್ಟು ಕಿ.ಮೀ ಉದ್ದದ ರೈಲ್ವೆ ಬ್ಯಾರಿಗೇಡ್ ನಿರ್ಮಾಣ ಮಾಡಲು ಗುರಿ ಹಾಕಿಕೊಳ್ಳಲಾಗಿದೆ ಹಾಗೂ 1 ಕಿ.ಮೀ ಅಭಿವೃದ್ಧಿಪಡಿಸಲು ಎಷ್ಟು ಹಣ ಖರ್ಚಾಗುತ್ತದೆ; ಈ ಅಭಿವೃದ್ಧಿ ಕಾರ್ಯದ ವಿಳಂಬಕ್ಕೆ ಕಾರಣಗಳೇನು; (ಮಾಹಿತಿ ನೀಡುವುದು) | ಹಾಸನ ಜಿಲ್ಲಾ ವ್ಯಾಪ್ತಿಯಲ್ಲಿ ಕಾಡಾನೆ ಹಾವಳಿ ತಡೆಗಟ್ಟಲು 45.00 ಕಿ.ಮೀ ಉದ್ದದ ರೈಲ್ವೆ ಬ್ಯಾರಿಕೇಡ್ ನಿರ್ಮಾಣ ಕೈಗೊಳ್ಳಲು ಉದ್ದೇಶಿಸಲಾಗಿದ್ದು, 2020-21ನೇ ಸಾಲಿನಲ್ಲಿ 4.511 ಕಿ.ಮೀ, 2021-22 ನೇ ಸಾಲಿನಲ್ಲಿ 5.142 ಕಿ.ಮೀ ರೈಲ್ವೆ ಬ್ಯಾರಿಕೇಡ್ ಕಾಮಗಾರಿಯನ್ನು ಕೈಗೊಳ್ಳಲಾಗಿರುತ್ತದೆ. 2022-23ನೇ ಸಾಲಿನಲ್ಲಿ 11.475 ಕಿಮೀ ರೈಲ್ವೇ ಬ್ಯಾರಿಕೇಡ್ ನಿರ್ಮಾಣ ಕಾಮಗಾರಿ ಪ್ರಗತಿಯಲ್ಲಿರುತ್ತದೆ. ಅನುದಾನದ ಲಭ್ಯತೆಗೆ ಅನುಗುಣವಾಗಿ ಉಳಿದ ರೈಲ್ವೆ ಬ್ಯಾರಿಕೇಡ್ ಕಾಮಗಾರಿಯನ್ನು ಮುಂದಿನ ಸಾಲಿನಲ್ಲಿ ಕೈಗೊಳ್ಳಲಾಗುವುದು.<br><br>ಪ್ರತಿ ಕಿ.ಮೀ ರೈಲ್ವೇ ಬ್ಯಾರಿಕೇಡ್ ನಿರ್ಮಾಣಕ್ಕೆ ಅಂದಾಜು ರೂ.153.00 ಲಕ್ಷಗಳ ವೆಚ್ಚವಾಗುತ್ತಿರುತ್ತದೆ. |
| ಇ) | ಹಾಸನ ಜಿಲ್ಲೆಯಲ್ಲಿ ಕಳೆದ ಮೂರು ವರ್ಷದಲ್ಲಿ ಆನೆ ದಾಳಿಯಿಂದ ಸಾವನ್ನಪ್ಪಿರುವ ರೈತರ ಸಂಖ್ಯೆ ಎಷ್ಟು; ಈ ಕುಟುಂಬದವರಿಗೆ ಪರಿಹಾರ ನೀಡಿರುವ ಮೊತ್ತವೆಷ್ಟು; (ವಿವರವಾದ ಮಾಹಿತಿ ಒದಗಿಸುವುದು) | ಹಾಸನ ಜಿಲ್ಲೆಯಲ್ಲಿ ಕಳೆದ ಮೂರು ವರ್ಷದಲ್ಲಿ ಆನೆ ದಾಳಿಯಿಂದ ಸಾವನ್ನಪ್ಪಿರುವ ರೈತರ ವಿವರ ಕೆಳಕಂಡಂತಿದೆ:- |

| ವರ್ಷ | ಮೃತಪಟ್ಟವರ ಸಂಖ್ಯೆ | ಪರಿಹಾರ ನೀಡಿರುವ ಮೊತ್ತ |
|---|---|---|
| 2019-20 | 03 | 15,00,000/- |
| 2020-21 | 05 | 37,50,000/- |
| 2021-22 | 05 | 37,50,000/- |

...2

**ಈ)** ಹಾಸನ ಜಿಲ್ಲೆಯಲ್ಲಿ ಕಾಡಂಚಿನ ಪ್ರದೇಶಗಳಲ್ಲಿ ಆನೆಗಳ ದಾಳಿ ಮತ್ತು ಹಾವಳಿ ಹೆಚ್ಚಾಗಿದ್ದು, ಕಳೆದ ಮೂರು ವರ್ಷಗಳಲ್ಲಿ ಎಷ್ಟು ಆನೆ ನಿರೋಧಕ ಕಂದಕ ನಿರ್ಮಾಣ/ಕೃಷಿ ಭೂಮಿಯಲ್ಲಿ ಸೌರ ಶಕ್ತಿ (ಸೋಲಾರ್) ಬೇಲಿ ಅಳವಡಿಸಿಕೊಡುವುದು ಸೇರಿದಂತೆ ಏನೇನು ಕ್ರಮ ತೆಗೆದುಕೊಂಡು ಅಳವಡಿಸಲಾಗಿದೆ: (ವಿವರ ನೀಡುವುದು)

ಹಾಸನ ಜಿಲ್ಲೆಯಲ್ಲಿ ಕಾಡಂಚಿನ ಪ್ರದೇಶಗಳಲ್ಲಿ ಕಳೆದ ಮೂರು ವರ್ಷಗಳಲ್ಲಿ ಆನೆ ನಿರೋಧಕ ಕಂದಕ ನಿರ್ಮಾಣ, ಟೆಂಟಕಲ್ ಬೇಲಿ ನಿರ್ಮಾಣ ಮತ್ತು 50:50 ಸಹಾಯಧನ ರೂಪದಲ್ಲಿ ಸೌರಶಕ್ತಿ (ಸೋಲಾರ್) ಬೇಲಿ ನಿರ್ಮಾಣ ಮಾಡಿರುವ ವಿವರ ಈ ಕೆಳಕಂಡಂತಿದೆ:-

**ಆನೆ ನಿರೋಧಕ ಕಂದಕ ನಿರ್ಮಾಣ**

| ಕ್ರ.ಸಂ | ವರ್ಷ | ವಲಯ | ಕಿ.ಮೀ |
|---|---|---|---|
| 1 | 2019-20 | - | - |
| 2 | 2020-21 | - | - |
| 3 | 2021-22 | ಬೇಲೂರು | 8.55 |
| | | ಹಾಸನ | 2.00 |
| | | ಅರಕಲಗೂಡು | 2.00 |

**ಟೆಂಟಕಲ್ ಬೇಲಿ ನಿರ್ಮಾಣ**

| ಕ್ರ.ಸಂ. | ವರ್ಷ | ವಲಯ | ಕಿ.ಮೀ. |
|---|---|---|---|
| 1 | 2019-20 | - | - |
| 2 | 2020-21 | - | - |
| 3 | 2021-22 | ಅರಕಲಗೂಡು | 2.00 |
| | | ಯಸಳೂರು | 12.00 |

**ಕೃಷಿ ಭೂಮಿಯಲ್ಲಿ ಸೋಲಾರ್ ತಂತಿಬೇಲಿ ನಿರ್ಮಾಣ**

| ಕ್ರ.ಸಂ | ವರ್ಷ | ವಲಯ | ಕಿ.ಮೀ. |
|---|---|---|---|
| 1 | 2019-20 | ಯಸಳೂರು | 2.608 |
| 2 | 2020-21 | ಸಕಲೇಶಪುರ | 0.755 |
| | | ಯಸಳೂರು | 3.600 |
| 3 | 2021-22 | ಆಲೂರು | 4.00 |

**ಉ)** ಆನೆ ದಾಳಿಯಿಂದ ಸಾವಿಗೀಡಾಗುತ್ತಿರುವ ಸಾರ್ವಜನಿಕರನ್ನು ರಕ್ಷಣೆ ಮಾಡಲು ಸಾಧ್ಯವಾಗುತ್ತಿಲ್ಲವೇ? (ವಿವರಿಸುವುದು)

ಕಾಡಾನೆಗಳ ಹಾವಳಿ ತಡೆಗಟ್ಟಲು ಕೈಗೊಂಡ ಕ್ರಮಗಳ ವಿವರ ಈ ಕೆಳಕಂಡಂತಿವೆ:-

1. ಹಾಸನ ಜಿಲ್ಲಾ ವ್ಯಾಪ್ತಿಯಲ್ಲಿ ಬರುವ ಸಕಲೇಶಪುರ, ಆಲೂರು, ಯಸಳೂರು, ಅರಕಲಗೂಡು ಮತ್ತು ಬೇಲೂರು ವಲಯಗಳಲ್ಲಿ ಕಾಡಾನೆಗಳ ಹಾವಳಿ ಹೆಚ್ಚಾಗಿದ್ದು, ಸದರಿ ಕಾಡಾನೆಗಳನ್ನು ನಿಯಂತ್ರಿಸಲು ತಲಾ 04 ಜನರ ತಂಡದಂತೆ 21 ಕಾಡಾನೆಗಳನ್ನು ಹಿಮ್ಮೆಟ್ಟಿಸುವ ತಂಡಗಳು, 05 ಕ್ಷಿಪ್ರ ಕಾರ್ಯಪಡೆ ತಂಡಗಳನ್ನು ರಚಿಸಿ ಕಾಡಾನೆಗಳನ್ನು ಹಿಮ್ಮೆಟ್ಟಿಸುವ ಕಾರ್ಯ ಕೈಗೊಳ್ಳಲಾಗುತ್ತಿದೆ.
2. ಅರಣ್ಯ ಪ್ರದೇಶಗಳ ಸುತ್ತ ಆನೆ ನಿರೋಧಕ ಕಂದಕಗಳ ನಿರ್ಮಾಣ ಮಾಡಲಾಗುತ್ತಿದೆ.
3. ಕಾಡಾನೆಗಳು ಒಳ ಬರುವುದನ್ನು ತಡೆಯಲು ಉಪಯೋಗಿಸಿದ ರೈಲ್ವೆ ಹಳಿಗಳನ್ನು ಬಳಸಿಕೊಂಡು ತಡೆಗೋಡೆ ನಿರ್ಮಿಸಲಾಗುತ್ತಿದೆ. (ರೈಲ್ವೆ ಬ್ಯಾರಿಕೇಡ್).

...3

| | | |
|---|---|---|
| | | 4. ರೈತರ ಜಮೀನಿಗಳಲ್ಲಿ 50:50 ಸಹಾಯಧನ (ಸಬ್ಸಿಡಿ) ಆಧಾರಿತ ಸೋಲಾರ್ ತಂತಿ ಬೇಲಿ ನಿರ್ಮಾಣ.<br>5. ಪಟಾಕಿ ಖರೀದಿಸಿ ರೈತರಿಗೆ ಹಂಚಿಕೆ ಮಾಡುವುದು.<br>6. ಗುಂಪಿನ ಹಿರಿಯ ಹೆಣ್ಣಾನೆಗಳನ್ನು ಗುರುತಿಸಿ ರೇಡಿಯೋ ಕಾಲರ್ ಅಳವಡಿಸಿ ಆನೆಗಳ ಗುಂಪಿನ ಚಲನ-ವಲನದ ಬಗ್ಗೆ ಸಾಮಾಜಿಕ ಜಾಲತಾಣ ಹಾಗೂ ಬಲ್ಕ್ ಎಸ್‌ಎಂಎಸ್ ಮೂಲಕ ಸಾರ್ವಜನಿಕರಿಗೆ ಮಾಹಿತಿ ನೀಡಲಾಗುತ್ತಿದೆ.<br>7. ಉಪಟಳ ನೀಡುತ್ತಿರುವ ಪುಂಡಾನೆಯನ್ನು ಸೆರೆಹಿಡಿದು ಸ್ಥಳಾಂತರಿಸಲಾಗುತ್ತಿದೆ.<br>8. ಅರಣ್ಯದೊಳಗೆ ಅಟ್ಟಣಿಗಳ ನಿರ್ಮಾಣ.<br>9. ವೀಕ್ಷಣಾ ಗೋಪುರಗಳ ನಿರ್ಮಾಣ (ವಾಚ್ ಟವರ್)<br>10. ವೀಕ್ಷಣಾ ರೇಖೆಗಳ ನಿರ್ವಹಣೆ<br>11. ಮಾನವ-ವನ್ಯಪ್ರಾಣಿ ಸಂಘರ್ಷ ನಿಯಂತ್ರಣದ ಬಗ್ಗೆ ರೈತರಿಗೆ, ಸಾರ್ವಜನಿಕರಿಗೆ ಅರಿವು ಮೂಡಿಸಲು ತರಬೇತಿ ಇತ್ಯಾದಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವುದರ ಮೂಲಕ ಕಾಡಾನೆಗಳ ಹಾವಳಿಯನ್ನು ಪರಿಣಾಮಕಾರಿಯಾಗಿ ತಡೆಗಟ್ಟಲು ಕ್ರಮ ಕೈಗೊಳ್ಳಲಾಗಿದೆ.<br>ಪ್ರಸ್ತುತ ಸರ್ಕಾರದ ಆದೇಶ ಸಂಖ್ಯೆ: ಅಪಜೀ 170 ಎಫ್‌ಡಬ್ಲ್ಯೂಎಲ್ 2022, ದಿನಾಂಕ:21.11.2022ರಲ್ಲಿ ಹಾಸನ, ಚಿಕ್ಕಮಗಳೂರು, ಮೈಸೂರು ಮತ್ತು ಕೊಡಗು ಜಿಲ್ಲೆಗಳ ಕಾಡಾನೆ ಹಾವಳಿ ಹೆಚ್ಚಾಗಿರುವ ಭಾಗಗಳಲ್ಲಿ ಕಾಡಾನೆ ಹಾವಳಿಯನ್ನು ತಡೆಗಟ್ಟಲು ಪ್ರತಿ ಜಿಲ್ಲೆಗೊಂದರಂತೆ |
| | | ಅಧಿಕಾರಿ / ಸಿಬ್ಬಂದಿಗಳನ್ನೊಳಗೊಂಡ ಆನೆ ಕಾರ್ಯಪಡೆ (Elephant Task Force) ಯನ್ನು ಹಾಸನ ಜಿಲ್ಲೆಯ ಸಕಲೇಶಪುರ ಕೇಂದ್ರ ಸ್ಥಾನದಲ್ಲಿ, ಚಿಕ್ಕಮಗಳೂರು ಜಿಲ್ಲೆಯ ಮೂಡಿಗೆರೆ ಕೇಂದ್ರ ಸ್ಥಾನದಲ್ಲಿ, ಮೈಸೂರು ಜಿಲ್ಲೆಯ ಹುಣಸೂರು ಕೇಂದ್ರ ಸ್ಥಾನದಲ್ಲಿ ಮತ್ತು ಕೊಡಗು ಜಿಲ್ಲೆಯ ಮಡಿಕೇರಿ ಕೇಂದ್ರ ಸ್ಥಾನದಲ್ಲಿ ರಚಿಸಲಾಗಿರುತ್ತದೆ. ಅದರನ್ವಯ ಆನೆ ಕಾರ್ಯಪಡೆ ರಚನೆಯಾಗಿ ಪ್ರಸ್ತುತ ಕಾರ್ಯ ನಿರ್ವಹಿಸುತ್ತಿದೆ.<br>ಟಾಸ್ಕ್ ಫೋರ್ಸ್ ಆದೇಶದ ಪ್ರತಿಯನ್ನು **ಅನುಬಂಧ** ದಲ್ಲಿ ನೀಡಲಾಗಿದೆ.<br>ಅದರನ್ವಯ ಹಾಸನ ಜಿಲ್ಲೆಯ ಸಕಲೇಶಪುರ ಕೇಂದ್ರ ಸ್ಥಾನದಲ್ಲಿ ಆನೆ ಕಾರ್ಯಪಡೆ ರಚನೆ (Elephant Task Force) ಯಾಗಿದ್ದು, ಪ್ರಸ್ತುತ ಕಾರ್ಯ ನಿರ್ವಹಿಸುತ್ತಿದೆ. |

**ಸಂಖ್ಯೆ: ಅಪಜೀ 201 ಎಫ್‌ಡಬ್ಲ್ಯೂಎಲ್ 2022**

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ

ಅನುಬಂಧ

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕಾಡಾನೆ ಹಾವಳಿ ತಡೆಗಟ್ಟುವ ನಿಟ್ಟಿನಲ್ಲಿ ಜಿಲ್ಲಾ Elephant Task Force ರಚಿಸುವ ಬಗ್ಗೆ.

*****

ಪ್ರಸ್ತಾವನೆ:

ಇತ್ತೀಚಿನ ದಿನಗಳಲ್ಲಿ ಹಾಸನ, ಚಿಕ್ಕಮಗಳೂರು, ಮೈಸೂರು, ಕೊಡಗು ಜಿಲ್ಲೆಗಳಲ್ಲಿ ಮತ್ತು ಇನ್ನಿತರ ಜಿಲ್ಲೆಗಳಲ್ಲಿ ಆನೆ ಸಂರಕ್ಷಿತ ಪ್ರದೇಶಗಳ ಸುತ್ತಮುತ್ತಲಿನ ಹಳ್ಳಿಗಳಲ್ಲಿ ಕಾಡಾನೆ ಹಾವಳಿ ಪ್ರಕರಣಗಳು ಹೆಚ್ಚಾಗಿ ವರದಿಯಾಗುತ್ತಿದೆ. ಈ ಹಾವಳಿಯಿಂದ ಬೆಳೆಹಾನಿ ಅಲ್ಲದೇ ಮಾನವ-ಪ್ರಾಣಹಾನಿ ಪ್ರಕರಣಗಳು ಹೆಚ್ಚಾಗಿ ವರದಿಯಾಗುತ್ತಿದೆ. ಆದುದರಿಂದ, ಮೇಲೆ ನಮೂದಿಸಿದ ಜಿಲ್ಲೆಗಳಲ್ಲಿ ಪ್ರತಿ ಜಿಲ್ಲೆಗೊಂದು **Elephant Task Force** ರಚಿಸಲು ಉದ್ದೇಶಿಸಲಾಗಿದೆ.

ಅದರಂತೆ, ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಅಪಜೀ 170 ಎಫ್‌ಡಬ್ಲ್ಯೂಎಲ್ 2022,**
**ಬೆಂಗಳೂರು, ದಿನಾಂಕ: 21-11-2022.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಹಾಸನ, ಚಿಕ್ಕಮಗಳೂರು, ಮೈಸೂರು ಮತ್ತು ಕೊಡಗು ಜಿಲ್ಲೆಗಳಲ್ಲಿ ಕಾಡಾನೆ ಹಾವಳಿ ಹೆಚ್ಚಾಗಿರುವ ಭಾಗಗಳಲ್ಲಿ ಕಾಡಾನೆ ಹಾವಳಿಯನ್ನು ತಡೆಗಟ್ಟಲು ಪ್ರತಿ ಜಿಲ್ಲೆಗೊಂದರಂತೆ ಈ ಕೆಳಕಂಡ ಅಧಿಕಾರಿ/ಸಿಬ್ಬಂದಿಗಳನ್ನೊಳಗೊಂಡ ಜಿಲ್ಲಾ **Elephant Task Force** ನ್ನು ರಚಿಸಿ ಆದೇಶಿಸಿದೆ.

| ಕ್ರ.ಸಂ | ಹುದ್ದೆ | ಸಂಖ್ಯೆ |
|---|---|---|
| 1. | ಉಪ ಅರಣ್ಯ ಸಂರಕ್ಷಣಾಧಿಕಾರಿ | 01 |
| 2. | ಸಹಾಯಕ ಅರಣ್ಯ ಉಪ ಸಂರಕ್ಷಣಾಧಿಕಾರಿ | 01 |
| 3. | ವಲಯ ಅರಣ್ಯಾಧಿಕಾರಿ | 01 |
| 4. | ಉಪ ವಲಯ ಅರಣ್ಯಾಧಿಕಾರಿ | 04 |
| 5. | ಅರಣ್ಯ ರಕ್ಷಕರು | 08 |
| 6. | ಹೊರಗುತ್ತಿಗೆ ಸಿಬ್ಬಂದಿಗಳು | 32 |

1. ಈ ಜಿಲ್ಲಾ Task Force ಗಳ ಕೇಂದ್ರಸ್ಥಾನಗಳು ಈ ಕೆಳಕಂಡಂತಿದೆ:-

| ಕ್ರ.ಸಂ | ಜಿಲ್ಲೆ | ಕೇಂದ್ರಸ್ಥಾನ |
|---|---|---|
| 1 | ಚಿಕ್ಕಮಗಳೂರು | ಮೂಡಿಗೆರೆ |
| 2 | ಹಾಸನ | ಸಕಲೇಶಪುರ |
| 3 | ಮೈಸೂರು | ಹುಣಸೂರು |
| 4 | ಕೊಡಗು | ಮಡಿಕೇರಿ |

2. ಈ ಟಾಸ್ಕ್ ಫೋರ್ಸ್‌ಗಳು ಆಯಾ ಅರಣ್ಯ ವೃತ್ತದ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ರವರ ನಿರ್ದೇಶನದ ಅಡಿಯಲ್ಲಿ ಕಾರ್ಯ ನಿರ್ವಹಿಸತಕ್ಕದ್ದು.

...2

3. ಈ ಜಿಲ್ಲಾ ಟಾಸ್ಕ ಫೋರ್ಸ್ ತಂಡಗಳು ಕಾಡಾನೆ ಹಾವಳಿ ಇರುವ ಪ್ರದೇಶಗಳಲ್ಲಿ ಗಸ್ತು ತಿರುಗುವುದು ಮತ್ತು ಜನ ವಸತಿ ಪ್ರದೇಶಗಳಲ್ಲಿ, ಕೃಷಿ ಪ್ರದೇಶಗಳಲ್ಲಿ ಹಾಗೂ ಕಾಫಿ ಎಸ್ಟೇಟ್‌ಗಳಲ್ಲಿ ಆನೆಗಳ ಚಲನವಲನಗಳನ್ನು ಗುರುತಿಸಿ ಕೂಡಲೇ ಸ್ಥಳಕ್ಕೆ ಧಾವಿಸಿ ಆನೆಗಳನ್ನು ಅರಣ್ಯ ಪ್ರದೇಶಕ್ಕೆ ಹಿಮ್ಮೆಟ್ಟಿಸುವುದು.
4. ಕಾಡಾನೆ ಹಾವಳಿ ಕಂಡು ಬರುವ ಪ್ರದೇಶಗಳ ಹಳ್ಳಿಗಳಲ್ಲಿನ ಸಾರ್ವಜನಿಕರಿಗೆ ಆನೆಗಳ ಚಲನವಲನ ಕುರಿತು ಮಾಹಿತಿ ನೀಡುವುದಲ್ಲದೇ ಅರಣ್ಯ ಪ್ರದೇಶದ ಒಳಗೆ ಸಂಚರಿಸದಂತೆ ಸಾರ್ವಜನಿಕರಿಗೆ ತಿಳುವಳಿಕೆ ನೀಡಿ ಪ್ರಚುರ ಪಡಿಸುವುದು.
5. ಪ್ರತಿ ಟಾಸ್ಕ್ ಫೋರ್ಸ್‌ನ ಕೇಂದ್ರಸ್ಥಾನದಲ್ಲಿ Control Room (ನಿಯಂತ್ರಣ ಕೊಠಡಿ) ಕಾರ್ಯನಿರ್ವಹಿಸತಕ್ಕದ್ದು ಮತ್ತು Control Room ನ ದೂರವಾಣಿ ಸಂಖ್ಯೆಯನ್ನು ಸಾರ್ವಜನಿಕರಲ್ಲಿ ಪ್ರಚುರ ಪಡಿಸುವುದು.
6. ಈ ಟಾಸ್ಕ್ ಫೋರ್ಸ್‌ಗಳಿಗೆ ಆನೆ ಹಾವಳಿ ತಡೆಗಟ್ಟುವ/ಹಿಮ್ಮೆಟಿಸುವ ಕಾರ್ಯಕ್ಕೆ ಬೇಕಾಗುವ ವಾಕಿಟಾಕಿ, ಬಂದೂಕು, ಪಟಾಕಿ ಹಾಗೂ ಸರ್ವಾಜನಿಕ ಜಾಗೃತಿ ಮೂಡಿಸಲು ಉಪಯೋಗಿತ ಸಲಕರಣೆಗಳು ಹಾಗೂ ಇನ್ನಿತರೇ ಅವಶ್ಯಕ ಸಲಕರಣೆ ಮತ್ತು ಸೌಲಭ್ಯಗಳನ್ನು ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಅರಣ್ಯ ಪಡೆ ಮುಖ್ಯಸ್ಥರು) ಇವರು ಒದಗಿಸುವುದು.
7. ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಅರಣ್ಯಪಡೆ ಮುಖ್ಯಸ್ಥರು) ಇವರು ಪ್ರತಿ ಜಿಲ್ಲೆಯ ಟಾಸ್ಕ್ ಫೋರ್ಸ್‌ಗೆ ವಲಯಾರಣ್ಯಾಧಿಕಾರಿ, ಉಪವಲಯಾರಣ್ಯಾಧಿಕಾರಿ ಮತ್ತು ಅರಣ್ಯ ರಕ್ಷಕರನ್ನು ಸ್ಥಳನಿಯುಕ್ತಿಗೊಳಿಸಿ ಕೂಡಲೇ ಆದೇಶ ಹೊರಡಿಸಲು ಕ್ರಮವಹಿಸತಕ್ಕದ್ದು.
8. ಸದರಿ ಟಾಸ್ಕ್ ಫೋರ್ಸ್‌ಗಳು ಆನೆ ಹಾವಳಿ ಪ್ರದೇಶಗಳಿಗೆ ಶೀಘ್ರವಾಗಿ ತಲುಪಲು ಅನುವಾಗುವಂತೆ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಅರಣ್ಯಪಡೆ ಮುಖ್ಯಸ್ಥರು) ಇವರು ಪ್ರತಿ ಜಿಲ್ಲೆಯ ಟಾಸ್ಕ್ ಫೋರ್ಸ್‌ಗೆ 03 ಬೊಲೇರೋ ಜೀಪ್‌ಗಳನ್ನು ಒದಗಿಸತಕ್ಕದ್ದು. ಇದ್ದಲ್ಲದೆ 02 Canter ವಾಹನಗಳನ್ನು ಬಾಡಿಗೆ ಆಧಾರದ ಮೇಲೆ ಪಡೆದು ನಿಯೋಜಿಸತಕ್ಕದ್ದು.
9. ಕಾಡಾನೆ ದಾಳಿ ತಡೆಗಟ್ಟುವ/ಆನೆಗಳನ್ನು ಹಿಮ್ಮೆಟ್ಟಿಸುವ ಸಂದರ್ಭಗಳಲ್ಲಿ ಸ್ಥಳೀಯ ಪೊಲೀಸ್ ಇಲಾಖೆಯ ಸಹಾಯ ಪಡೆಯತಕ್ಕದ್ದು.

ಈ ಸರ್ಕಾರದ ಆದೇಶವನ್ನು ಕೂಡಲೇ ಅನುಷ್ಠಾನಗೊಳಿಸಲು ಹಾಗೂ ಈ ಟಾಸ್ಕ್ ಫೋರ್ಸ್‌ಗಳು ಕಾರ್ಯಪ್ರವೃತ್ತರಾಗುವ ನಿಟ್ಟಿನಲ್ಲಿ ಅಗತ್ಯ ಕ್ರಮ ಕೈಗೊಳ್ಳುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಲ್ಲಿ,

(ಜಿ. ಮಂಜುಳ)
ಸರ್ಕಾರದ ಅಧೀನ ಕಾರ್ಯದರ್ಶಿ
ಅರಣ್ಯ, ಜೀವಿಪರಿಸ್ಥಿತಿ ಮತ್ತು ಪರಿಸರ ಇಲಾಖೆ
(ಅರಣ್ಯ-ಬಿ)

ಇವರಿಗೆ:

1. ಪ್ರಧಾನ ಮಹಾಲೇಖಪಾಲರು, (ಲೆಕ್ಕಪತ್ರ / ಲೆಕ್ಕಪರಿಶೋಧನೆ), ಕರ್ನಾಟಕ, ಬೆಂಗಳೂರು.

...3

2. ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಅಪಮು), ಅರಣ್ಯ ಭವನ, ಮಲ್ಲೇಶ್ವರಂ, ಬೆಂಗಳೂರು.
3. ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ವನ್ಯಜೀವಿ), ಅರಣ್ಯ ಭವನ, ಮಲ್ಲೇಶ್ವರಂ, ಬೆಂಗಳೂರು.
4. ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಅಭಿವೃದ್ಧಿ) ಅರಣ್ಯ ಭವನ, ಮಲ್ಲೇಶ್ವರಂ, ಬೆಂಗಳೂರು.
5. ಅಪರ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಆಡಳಿತ ಮತ್ತು ಸಮನ್ವಯ) ಅರಣ್ಯ ಭವನ, ಮಲ್ಲೇಶ್ವರಂ, ಬೆಂಗಳೂರು.
6. ಜಿಲ್ಲಾ ಪೊಲೀಸ್ ಅಧೀಕ್ಷಕರು, ಟಾಸ್ಕ್ ಫೋರ್ಸ್‌ನ ಸಂಬಂಧಪಟ್ಟ ಜಿಲ್ಲೆ.
7. ಸನ್ಮಾನ್ಯ ಮುಖ್ಯಮಂತ್ರಿಯವರ ಆಪ್ತ ಕಾರ್ಯದರ್ಶಿಯವರು, ವಿಧಾನಸೌಧ, ಬೆಂಗಳೂರು
8. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ರವರ ಆಪ್ತ ಕಾರ್ಯದರ್ಶಿ, ಅರಣ್ಯ, ಜೀವಿಪರಿಸ್ಥಿತಿ ಮತ್ತು ಪರಿಸರ ಇಲಾಖೆ ಬಹುಮಹಡಿಗಳ ಕಟ್ಟಡ, ಬೆಂಗಳೂರು.
9. ಸರ್ಕಾರದ ಪ್ರಧಾನ ಕಾರ್ಯದರ್ಶಿ (ಅರಣ್ಯ) ರವರ ಆಪ್ತ ಕಾರ್ಯದರ್ಶಿ, ಅರಣ್ಯ, ಜೀವಿಪರಿಸ್ಥಿತಿ ಮತ್ತು ಪರಿಸರ ಇಲಾಖೆ ಬಹುಮಹಡಿಗಳ ಕಟ್ಟಡ, ಬೆಂಗಳೂರು.
10. ಸರ್ಕಾರದ ಜಂಟಿ ಕಾರ್ಯದರ್ಶಿ (ಅರಣ್ಯ) ರವರ ಆಪ್ತ ಸಹಾಯಕರು, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
11. ಶಾಖಾ ರಕ್ಷಾ ಕಡತ